# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿನಲ್ಲಿ ಕೃಷಿ ಇಲಾಖೆಯ ರಾಜ್ಯವಲಯ ಚಾಲ್ತಿಯೋಜನೆಗಳಿಗೆ ನಾಲ್ಕನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಕೃಇ/45/ಕೃಯೋಕಾ/2014, ದಿನಾಂಕ:11-04-2014.
2. ಸರ್ಕಾರದ ಆದೇಶ ಸಂಖ್ಯೆ:ಕೃಇ/48/ಕೃಯೋಕಾ/2014, ದಿನಾಂಕ:09-05-2014.
3. ಸರ್ಕಾರದ ಆದೇಶ ಸಂಖ್ಯೆ:ಕೃಇ/48/ಕೃಯೋಕಾ/2014, ದಿನಾಂಕ:21-07-2014.
4. ಸರ್ಕಾರದ ಆದೇಶ ಸಂಖ್ಯೆ:ಕೃಇ/48/ಕೃಯೋಕಾ/2014, ದಿನಾಂಕ:11-08-2014.
5. ಸರ್ಕಾರದ ಆದೇಶ ಸಂಖ್ಯೆ:ಕೃಇ/48/ಕೃಯೋಕಾ/2014, ದಿನಾಂಕ:07-11-2014
6. ಕೃಷಿ ನಿರ್ದೇಶಕರ ಪತ್ರ ಸಂಖ್ಯೆ: ಪಿಎಲ್ಎನ್/ತಾಂ-1/ಅನುದಾನಬಿಡುಗಡೆ/2014-15 ದಿನಾಂಕ:17/19-01-2014.
7. ವ್ಯವಸ್ಥಾಪಕ ನಿರ್ದೇಶಕರು, ಕೆಪೆಕ್ ಇವರ ಪತ್ರ ಸಂಖ್ಯೆ: ಕೆಪೆಕ್:2014-15:757, ದಿನಾಂಕ: 24.11.2014.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2014-15ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಕೃಷಿ ಇಲಾಖೆಯ 2014-15ನೇ ಸಾಲಿನಲ್ಲಿನ ಚಾಲ್ತಿಯೋಜನೆಗಳಿಗೆ ಮೊದಲನೇ ತ್ರೈಮಾಸಿಕ ಅನುದಾನವಾಗಿ ರೂ.21282.48 ಲಕ್ಷ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪ್ರಸ್ತಾವನೆಯಲ್ಲಿ ಕೃಷಿ ಇಲಾಖೆಯ ಹಂಗಾಮು ಆಧಾರಿತ ಮೂರು ಯೋಜನೆಗಳಿಗೆ Vote on account limit (1/3) ಸೀಮಿತಗೊಳಿಸಿ ಒಟ್ಟು ರೂ.6221.87 ಲಕ್ಷ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶದಲ್ಲಿ ಕೃಷಿ ಇಲಾಖೆಯ 2014-15ನೇ ಸಾಲಿನಲ್ಲಿನ ಚಾಲ್ತಿಯೋಜನೆಗಳಿಗೆ ಎರಡನೇ ತ್ರೈಮಾಸಿಕ ಅನುದಾನವಾಗಿ ರೂ.14644.77 ಲಕ್ಷ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಆದೇಶದಲ್ಲಿ ಕೃಷಿ ಇಲಾಖೆಯ 2014-15ನೇ ಸಾಲಿನಲ್ಲಿನ ಚಾಲ್ತಿಯೋಜನೆಗಳಿಗೆ ಮೂರನೇ ತ್ರೈಮಾಸಿಕ ಅನುದಾನವಾಗಿ ರೂ.21074.56 ಲಕ್ಷ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರ ಪತ್ರದಲ್ಲಿ 2014-15ನೇ ಸಾಲಿನಲ್ಲಿ ಚಾಲ್ತಿ ಯೋಜನೆಗಳಡಿ ಮುಂದುವರೆಸಲಾಗಿರುವ 07 ಯೋಜನಾ ಕಾರ್ಯಕ್ರಮಗಳಿಗೆ ನಾಲ್ಕನೇ ತ್ರೈಮಾಸಿಕದ ಅನುದಾನ ಒಟ್ಟು ರೂ. 21074.56 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೃಷಿ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (7) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆಪೆಕ್ ಇವರು ವಿವಿಧ ಕೇಂದ್ರಗಳಲ್ಲಿ ಒಂದು ಲಕ್ಷ ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮುಗಳನ್ನು ನಿರ್ಮಾಣ ಮಾಡುವ ಸಲುವಾಗಿ ರೂ. 8015 ಲಕ್ಷ ಮೊತ್ತದ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೃಷಿ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಗಣಿಸಲು ನಿರ್ಧರಿಸಲಾಯಿತು. ಅದರಂತೆ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಕೃಇ 48 ಕೃಯೋಕಾ 2014, ಬೆಂಗಳೂರು, ದಿನಾಂಕ: 09.03.2015

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, 2014-15ನೇ ಸಾಲಿನಲ್ಲಿ ಮುಂದುವರೆಸಲಾದ ಚಾಲ್ತಿ ಯೋಜನೆಗಳಲ್ಲಿ ರಾಜ್ಯವಲಯದ ಈ ಕೆಳಕಂಡ ಯೋಜನೆಗಳಿಗೆ ಒಟ್ಟು **ರೂ. 17316.86 ಲಕ್ಷಗಳನ್ನು (ಹದಿನೇಳು ಸಾವಿರದ ಮೂರು ನೂರಾ ಹದಿನಾರು ಲಕ್ಷದ ಎಂಭತ್ತಾರು ಸಾವಿರ ರೂಪಾಯಿಗಳು ಮಾತ್ರ)** ನಾಲ್ಕನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

(ಲಕ್ಷ ರೂ.ಗಳಲ್ಲಿ)

| ಕ್ರ. ಸಂ | ಯೋಜನೆ | ಲೆಕ್ಕ ಶೀರ್ಷಿಕೆ | ಒದಗಿಸಿರುವ ಆಯವ್ಯಯ | ಮೊದಲನೇ ತ್ರೈಮಾಸಿಕಕ್ಕೆ ದಿ: 09-05-2014 ರಲ್ಲಿ ಬಿಡುಗಡೆ ಯಾಗಿರುವ ಅನುದಾನ | Vote-on-Account Limit ಪ್ರಕಾರ ಬಿಡುಗಡೆ ಗೊಳಿಸಿದ ಮೊತ್ತ | ಎರಡನೇ ತ್ರೈಮಾಸಿಕಕ್ಕೆ ಬಿಡುಗಡೆ ಯಾಗಿರುವ ಅನುದಾನ | ಮೂರನೇ ತ್ರೈಮಾಸಿಕಕ್ಕೆ ಬಿಡುಗಡೆ ಯಾಗಿರುವ ಅನುದಾನ | ಈ ಆದೇಶದ ಮೂಲಕ ನಾಲ್ಕನೇ ತ್ರೈಮಾಸಿಕಕ್ಕೆ ಬಿಡುಗಡೆ ಮಾಡಿರುವ ಅನುದಾನ |
|---|---|---|---|---|---|---|---|---|
| 1 | ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ | 2401-00-103-0-15 | 55392.41 | 13848.10 | 4616.04 | 9232.06 | 13848.10 | 13848.11 |
| 2 | ಸಾವಯವ ಕೃಷಿ | 2401-00-104-0-12 | 900.00 | 225.00 | | 225.00 | 225.00 | 225.00 |
| 3 | ಇತರೆ ಕೃಷಿ ಯೋಜನೆಗಳು | 2401-00-800-1-40 | 20000.00 | 960.00 | | 544.17 | 752.08 | 3243.75 |
| | ಒಟ್ಟು | | **76292.41** | **15033.10** | **4616.04** | **10001.23** | **14825.18** | **17316.86** |

ಮೇಲ್ಕಂಡ ಅನುದಾನದ ಲೆಕ್ಕ ಶೀರ್ಷಿಕೆ: 2401-00-800-1-40 ಅಡಿಯಲ್ಲಿ ಬಿಡುಗಡೆ ಮಾಡಿದ್ದ ರೂ. 3243.75 ಲಕ್ಷ ಮೊತ್ತದಲ್ಲಿ; ರೂ.752.08 ಲಕ್ಷ ಮೊತ್ತವನ್ನು ಕೃಷಿ ಇಲಾಖೆಗೆ ಮತ್ತು ರೂ 2491.67 ಲಕ್ಷ ಮೊತ್ತವನ್ನು ಕೆಪೆಕ್ ಸಂಸ್ಥೆಗೆ ಕೃಷಿ ಆಯುಕ್ತರು ಬಿಡುಗಡೆ ಮಾಡತಕ್ಕದ್ದು. ಕೆಪೆಕ್ ಸಂಸ್ಥೆಯು ಸಲ್ಲಿಸುವ ಬಿಲ್ಲುಗಳಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ ನೀಡಿದೆ.

ಮೇಲ್ಕಂಡ ಯೋಜನೆಗಳಿಗೆ ಇದುವರೆಗೆ ಬಿಡುಗಡೆ ಮಾಡಿರುವ ಹಾಗೂ ಈ ಆದೇಶದ ಮೂಲಕ ಬಿಡುಗಡೆ ಮಾಡಲಾದ ಅನುದಾನವನ್ನು ನಿಗದಿಪಡಿಸಿದ ಅನುಮೋದಿತ ಕಾರ್ಯಕ್ರಮಗಳಿಗೆ ಸಂಪೂರ್ಣವಾಗಿ ವೆಚ್ಚ ಮಾಡಿ ಶೇ.100 ರಷ್ಟು ಪ್ರಗತಿಯನ್ನು ಸಾಧಿಸತಕ್ಕದ್ದು.

ರಾಜ್ಯವಲಯ ಯೋಜನೆಗಳಡಿ ಆಗಿಂದಾಗ್ಯೆ ಹೊರಡಿಸಲಾಗುವ ಮಾರ್ಗಸೂಚಿಗಳನ್ನು ಅನುಸರಿಸಿ ಕೃಷಿ ಆಯುಕ್ತರು ಯೋಜನೆಗಳನ್ನು ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಟಿಪ್ಪಣಿ ಸಂ: ಆಇ 101 ವೆಚ್ಚ-4 2015, ದಿನಾಂಕ:25-02-2015 ರಲ್ಲಿನ ಸಹಮತಿಯ ಮೇರೆಗೆ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಜ್ಯೋತಿ.ಆರ್.ಜೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಪ್ರತಿ:-

1) ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3) ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5) ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6) ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
7) ಸರ್ಕಾರದ ಉಪ ಕಾರ್ಯದರ್ಶಿ -1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
8) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
9) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
10) ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
11) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು ರವರಿಗೆ ಮಾಹಿತಿಗಾಗಿ ನೀಡಲಾಗಿದೆ.(ಕೃಷಿ ಆಯುಕ್ತರ ಮುಖಾಂತರ).
12) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.
13) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನ ಸೌಧ, [illegible]